ಬರಕನಹಾಳ್ ಗ್ರಾಮದ ಸರ್ಕಾರಿ ಬಾಲಕರ ವಿದ್ಯಾರ್ಥಿ ನಿಲಯಕ್ಕೆ ಕಟ್ಟಡ ನಿರ್ಮಾಣ

232 (524) ಶ್ರೀ ಸುರೇಶ್ ಬಾಬು. ಸಿ.ಬಿ. ಶಾಸಕರು,(ಚಿಕ್ಕನಾಯಕನಹಳ್ಳಿ) :– ಮಾನ್ಯ ಸಮಾಜ ಕಲ್ಯಾಣ ಮತ್ತು ಬಂದೀಖಾನೆ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಚಿಕ್ಕನಾಯಕನಹಳ್ಳಿ ವಿಧಾನಸಭಾ ಕ್ಷೇತ್ರದ, ಹುಳಿಯಾರು ಹೋಬಳಿ ಬರಕನಾಳ್ ಗ್ರಾಮಕ್ಕೆ ಸರ್ಕಾರಿ ಬಾಲಕರ ವಿದ್ಯಾರ್ಥಿ ನಿಲಯ ಮಂಜೂರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ವಿದ್ಯಾರ್ಥಿ ನಿಲಯದ ಕಟ್ಟಡ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲು ಸರ್ಕಾರ ಕ್ರಮ ತೆಗೆದುಕೊಂಡಿದೆಯೇ;

(ಇ) ಈ ಕಾಮಗಾರಿಗಾಗಿ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ; ಎಷ್ಟು ದಿನಗಳಲ್ಲಿ ಕಾಮಗಾರಿ ಪ್ರಾರಂಭಿಸಲಾಗುವುದು?

ಶ್ರೀ ಎ. ನಾರಾಯಣಸ್ವಾಮಿ: ಮಾನ್ಯ ಸಮಾಜ ಕಲ್ಯಾಣ ಮತ್ತು ಬಂದೀಖಾನೆ ಸಚಿವರು

(ಅ) ಹೌದು

(ಆ) ಹೌದು

(ಇ) ಸದರಿ ಕಟ್ಟಡವನ್ನು ನಿರ್ಮಿಸಲು ನಿವೇಶನವನ್ನು ಪಡೆಯಲಾಗಿದ್ದು, ರೂ 99.35ಲಕ್ಷಗಳಿಗೆ ಅಂದಾಜು ಪಟ್ಟಿಯನ್ನು ತಯಾರಿಸಲಾಗಿದೆ. ಸದ್ಯದಲ್ಲಿಯೇ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದು

ಅಂಗನವಾಡಿ ಕಟ್ಟಡಗಳ ದುರಸ್ತಿ

233 (525) ಶ್ರೀ ಸುರೇಶ್ ಬಾಬು. ಸಿ.ಬಿ. (ಚಿಕ್ಕನಾಯಕನಹಳ್ಳಿ) :– ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–